ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಬೀದರ್ ಸರ್ಕಾರಿ ಇಂಜಿನಿಯರಿಂಗ್ ಕಾಲೇಜ್ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು):-

510(705) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2017ರಲ್ಲಿ ಮಂಜೂರಾದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಕಟ್ಟಡ ನಿರ್ಮಾಣಕ್ಕೆ ಎಷ್ಟು ಅನುದಾನ ಮೀಸಲಿಡಲಾಗಿದೆ; ಇಲ್ಲಿಯವರೆಗೆ ಎಷ್ಟು ಅನುದಾನ ಖರ್ಚು ಮಾಡಲಾಗಿದೆ;

(ಆ) ಇಂಜಿನಿಯರಿಂಗ್ ಮಹಾವಿದ್ಯಾಲಯದ ಕಟ್ಟಡ ನಿರ್ಮಾಣದ ಕಾಲಮಿತಿ ಏನು; ಇಲ್ಲಿಯವರೆಗೆ ಮುಗಿಯದಿರಲು ಕಾರಣವೇನು; ವಿಳಂಬವಾಗಿದ್ದರೆ, ಆ ಗುತ್ತಿಗೆದಾರರ ವಿರುದ್ಧ ತೆಗೆದುಕೊಂಡ ಕ್ರಮವೇನು?